# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 195 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 10.12.2018 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಳೆದ 5 ವರ್ಷಗಳಲ್ಲಿ ಸವಿತಾ ಸಮಾಜ, ತಿಗಳ, ಮಡಿವಾಳ, ಕುಂಬಾರ ಈ ಜನಾಂಗದ ಆರ್ಥಿಕ ಅಭಿವೃದ್ಧಿಗೆ ಮೀಸಲಿಟ್ಟ ಹಣವೆಷ್ಟು; (ವರ್ಷವಾರು ಮಾಹಿತಿ ನೀಡುವುದು) | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಸವಿತಾ ಸಮಾಜ, ತಿಗಳ, ಮಡಿವಾಳ, ಕುಂಬಾರ ಜನಾಂಗಗಳ ಅಭಿವೃದ್ಧಿಗಾಗಿ ಪ್ರತ್ಯೇಕ ಅನುದಾನ ಒದಗಿಸಿರುವುದಿಲ್ಲ. ನಿಗಮಕ್ಕೆ ಒದಗಿಸಿದ ಅನುದಾನದಲ್ಲಿ 2016-17 ಮತ್ತು 2017-18ನೇ ಸಾಲಿನಲ್ಲಿ ಹಂಚಿಕೆ ಮಾಡಿಕೊಳ್ಳಲಾಗಿದೆ. ವರ್ಷವಾರು ಮಾಹಿತಿ ಈ ಕೆಳಕಂಡಂತಿದೆ. (ಲಕ್ಷ ರೂ.ಗಳಲ್ಲಿ) (see table below) |
| ಆ) | ಸದರಿ ಜನಾಂಗದವರ ಅಭಿವೃದ್ಧಿಗಾಗಿ ರೂಪಿಸಲಾಗಿರುವ ಕಾರ್ಯಕ್ರಮಗಳಾವುವು; ಇದರಲ್ಲಿ ವೆಚ್ಚ ಮಾಡಲಾದ ಹಣವೆಷ್ಟು; ಮತ್ತು ಅನುಷ್ಠಾನಗೊಳಿಸಿರುವುದೆಷ್ಟು; | ಸದರಿ ಜನಾಂಗದವರಿಗೆ ಅಭಿವೃದ್ಧಿಗಾಗಿ ರೂಪಿಸಲಾಗಿರುವ ಕಾರ್ಯಕ್ರಮಗಳು ಈ ಕೆಳಕಂಡತಿವೆ.<br>1. ಸ್ವಯಂ ಉದ್ಯೋಗ ಸಾಲ ಯೋಜನೆಗಳು.<br>2. ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆಗಳು.<br>3. ಅರಿವು-ಶೈಕ್ಷಣಿಕ ಸಾಲ ಯೋಜನೆ.<br>4. ಗಂಗಾ ಕಲ್ಯಾಣ ನೀರಾವರಿ ಯೋಜನೆ.<br>5. ತರಬೇತಿ ಕಾರ್ಯಕ್ರಮಗಳು.<br>ಮೇಲ್ಕಂಡ ಕಾರ್ಯಕ್ರಮಗಳಲ್ಲಿ ವೆಚ್ಚ ಮಾಡಲಾದ ಹಣ ರೂ.8579.25ಲಕ್ಷಗಳು. ಮೇಲ್ಕಂಡ ಎಲ್ಲಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದೆ. |

(ಲಕ್ಷ ರೂ.ಗಳಲ್ಲಿ)

| ಕ್ರ ಸಂ. | ಜನಾಂಗದ | ಮೀಸಲಿಟ್ಟ ಮೊತ್ತ | |
|---|---|---|---|
| | | 2016-17 | 2017-18 |
| 1 | ಸವಿತಾ ಸಮಾಜ | 1000.00 | 1500.00 |
| 2 | ತಿಗಳ ಸಮಾಜ | 1000.00 | 1500.00 |
| 3 | ಮಡಿವಾಳ ಸಮಾಜ | 1000.00 | 1500.00 |
| 4 | ಕುಂಬಾರ ಸಮಾಜ | 1000.00 | 1500.00 |

| | | |
|---|---|---|
| ಇ) | 2018–19ನೇ ಸಾಲಿನಲ್ಲಿ ಸವಿತಾ ಸಮಾಜ, ತಿಗಳ, ಮಡಿವಾಳ, ಕುಂಬಾರ ಜನಾಂಗಕ್ಕೆ ಮೀಸಲಿಟ್ಟಿರುವ ಅನುದಾನವೆಷ್ಟು ಹಾಗೂ ಕಾರ್ಯಕ್ರಮಗಳ ರೂಪರೇಷೆ ಮತ್ತು ಅನುಷ್ಠಾನದ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು; | 2018–19ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಸವಿತಾ ಸಮಾಜ, ತಿಗಳ, ಮಡಿವಾಳ, ಕುಂಬಾರ ಜನಾಂಗದ ಅಭಿವೃದ್ಧಿಗೆ ಒದಗಿಸಿರುವ ಅನುದಾನದ ಮೊತ್ತ ರೂ.4100.00ಲಕ್ಷಗಳು. ಕಾರ್ಯಕ್ರಮದ ರೂಪರೇಷೆ ಮತ್ತು ಅನುಷ್ಠಾನದ ಸಂಪೂರ್ಣ ಮಾಹಿತಿ **ಅನುಬಂಧ–1ರಲ್ಲಿ** ನೀಡಿದೆ. |
| ಈ) | ಈ ಜನಾಂಗದ ಶೈಕ್ಷಣಿಕ ಬೆಳವಣಿಗೆಯ ಅಭಿವೃದ್ಧಿಗೆ ಕಳೆದ 5 ವರ್ಷಗಳ ಮೀಸಲಿಟ್ಟ ಅನುದಾನ ಎಷ್ಟು; ವೆಚ್ಚವಾಗಿರುವ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ಈ ಜನಾಂಗದ ಶೈಕ್ಷಣಿಕ ಬೆಳವಣಿಗೆಯ ಅಭಿವೃದ್ಧಿಗೆ ಪ್ರತ್ಯೇಕವಾಗಿ ಅನುದಾನ ಒದಗಿಸಿರುವುದಿಲ್ಲ. ನಿಗಮಕ್ಕೆ ಒದಗಿಸಿದ ಅನುದಾನದಲ್ಲಿಯೇ ಎಲ್ಲಾ ಹಿಂದುಳಿದ ವರ್ಗಗಳ ಜನಾಂಗದವರ ಶೈಕ್ಷಣಿಕ ಅಭಿವೃದ್ಧಿಗೆ ನಿಗಮದವತಿಯಿಂದ ಶೈಕ್ಷಣಿಕ ಸಾಲವನ್ನು ನೀಡಲು ರೂ.7281.00ಲಕ್ಷಗಳನ್ನು ಮೀಸಲಿಡಲಾಗಿದೆ. ರೂ.6556.32ಲಕ್ಷಗಳನ್ನು ವೆಚ್ಚ ಮಾಡಲಾಗಿದೆ. |
| ಉ) | ಜನಾಂಗದ ಅಭಿವೃದ್ಧಿಗಾಗಿ ರೂಪಿಸಿರುವ ಕಾರ್ಯಕ್ರಮದ ರೂಪುರೇಷೆಗಳೇನು ಮತ್ತು ಅನುಷ್ಠಾನದ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | ಹಿಂದುಳಿದ ವರ್ಗಗಳ ಜನಾಂಗದ ಅಭಿವೃದ್ಧಿಗಾಗಿ ರೂಪಿಸಿರುವ ಕಾರ್ಯಕ್ರಮದ ರೂಪುರೇಷೆಗಳು ಮತ್ತು ಅನುಷ್ಠಾನದ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳ ಮಾಹಿತಿಯನ್ನು **ಅನುಬಂಧ–1ರಲ್ಲಿ** ನೀಡಿದೆ. |

ಸಂ: ಹಿಂವಕ 1204 ಬಿಎಂಎಸ್ 2018

(ಸಿ.ಪುಟ್ಟರಂಗಶೆಟ್ಟಿ)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

## ಅನುಬಂಧ–1

## ವಿಧಾನ ಪರಿಷತ್ ಮಾನ್ಯ ಸದಸ್ಯರಾದ ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿರುವವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ–195ಕ್ಕೆ ನಿಗಮದ ಉತ್ತರಕ್ಕೆ ಅನುಬಂಧ–I.

* * *

ಕಾರ್ಯಕ್ರಮಗಳ ರೂಪುರೇಷೆ ಹಾಗೂ ಅನುಷ್ಠಾನದ ಸಂಪೂರ್ಣ ಮಾಹಿತಿ ಈ ಕೆಳಕಂಡಂತಿದೆ.

1. ಸರ್ಕಾರವು ಪ್ರತಿ ಆರ್ಥಿಕ ವರ್ಷದಲ್ಲಿ ಒದಗಿಸುವ ಆಯವ್ಯಯಕ್ಕೆ ಅನುಗುಣವಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸುವುದಕ್ಕಾಗಿ ಕ್ರಿಯಾ ಯೋಜನೆಯನ್ನು ರೂಪಿಸಲಾಗಿದೆ.
2. ಕ್ರಿಯಾ ಯೋಜನೆ ಪ್ರಕಾರ ಆರ್ಥಿಕ ಮತ್ತು ಭೌತಿಕ ಗುರಿ ನಿಗದಿಪಡಿಸಿ ಅದರಂತೆ ರಾಜ್ಯಾದ್ಯಂತ ಪತ್ರಿಕಾ ಪ್ರಕಟಣೆ ಹೊರಡಿ ಅರ್ಜಿಗಳನ್ನು ಆಹ್ವಾನಿಸಲಾಗುತ್ತದೆ.
3. ಸ್ವೀಕೃತಗೊಂಡ ಅರ್ಜಿಗಳನ್ನು ಪಟ್ಟಿ ಮಾಡಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿನ ಆಯ್ಕೆ ಸಮಿತಿ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಅಧ್ಯಕ್ಷತೆಯಲ್ಲಿರುವ ಸಮಿತಿ ಆಯ್ಕೆ ಮುಂದೆ ಸಕಾಲದಲ್ಲಿ ಮಂಡಿಸಲಾಗುತ್ತದೆ.

- ಅರಿವು–ಶೈಕ್ಷಣಿಕ ಸಾಲ ಯೋಜನೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗ ಮುಂದುವರೆಸಲು ಅಡಚಣೆಯಾಗದಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಮುಂಗಡವಾಗಿ ಠೇವಣಿ ಇರಿಸಿ ವಿದ್ಯಾರ್ಥಿಗಳ ಕಾಲೇಜಿನ ಪ್ರವೇಶ ಹಂತದಲ್ಲಿ ಸೌಲಭ್ಯ ಒದಗಿಸಲಾಗುತ್ತಿದೆ.

4. ಆಯ್ಕೆ ಸಮಿತಿಗಳು ಆಯಾಯ ಯೋಜನೆಯ ಮಾರ್ಗಸೂಚಿ ಮತ್ತು ಸರ್ಕಾರದ ಆದೇಶಗಳನ್ವಯ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತಿದೆ.
5. ಆಯ್ಕೆಯಾದ ಫಲಾನುಭವಿಗಳಿಗೆ ಅವರು ಕೈಗೊಳ್ಳುವ ಆರ್ಥಿಕ ಚಟುವಟಿಕಗಳು ಅನುಸಾರ ಮಂಜೂರಾದ ಸೌಲಭ್ಯವನ್ನು ಆರ್.ಟಿ.ಜಿ.ಎಸ್/ಡಿ.ಬಿ.ಟಿ. ಮುಖಾಂತರ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವರ್ಗಾಯಿಸಲಾಗುತ್ತಿದೆ.
6. ಆಯಾ ಜಿಲ್ಲೆಯ ನಿಗಮದ ಜಿಲ್ಲಾ ಮಟ್ಟದ ಅಧಿಕಾರಿಗಳಿಂದ ಫಲಾನುಭವಿಗಳು ಸಾಲದ [illegible] ಘಟಕ ಸ್ಥಾಪಿಸಿರುವ ಬಗ್ಗೆ ಪರಿಶೀಲಿಸಲಾಗುತ್ತಿದೆ.